# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

5

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 26/6/20

### ಶಾಸಕರ ಭವನ ಪ್ರವೇಶಕ್ಕೆ ಷರತ್ತು

ಪ್ರ. ವಾ. 26-6-20

ಬೆಂಗಳೂರು: ಕೊರೊನಾ ಸೋಂಕು ಹರಡುವಿಕೆ ತಡೆಯುವ ನಿಟ್ಟಿನಲ್ಲಿ ಶಾಸಕರ ಭವನದ ಕಟ್ಟಡಗಳಿಗೆ ಸೋಂಕು ನಿವಾರಕ ಔಷಧಿ ಸಿಂಪಡಿಸಲು ತೀರ್ಮಾನಿಸಲಾಗಿದೆ.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮತ್ತು ವಿಧಾನಪರಿಷತ್ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ನೇತೃತ್ವದಲ್ಲಿ ಗುರುವಾರ ನಡೆದ ಸಭೆಯಲ್ಲಿ, ಶಾಸಕರ ಭವನ ಪ್ರವೇಶ ಕುರಿತಂತೆ ಕೆಲವು ಷರತ್ತುಗಳನ್ನು ವಿಧಿಸಲು ನಿರ್ಧರಿಸಲಾಯಿತು.

ಶಾಸಕರ ಭವನ ಪ್ರವೇಶಿಸುವವರ ಉದ್ದೇಶ, ಹೆಸರು, ಮೊಬೈಲ್ ಸಂಖ್ಯೆ ಕಡ್ಡಾಯವಾಗಿ ದಾಖಲಿಸಿಕೊಂಡು, ಪ್ರಾಥಮಿಕ ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು. ಶಾಸಕರ ಜೊತೆ ಆಪ್ತ ಸಹಾಯಕ ಮತ್ತಿತರ ಸಿಬ್ಬಂದಿ ಸೇರಿ ನಾಲ್ವರಿಗೆ ಮಾತ್ರ ಪ್ರವೇಶ, ಶಾಸಕ ವಾಹನಗಳಿಗೆ ಮಾತ್ರ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗುತ್ತದೆ.